# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಗುಲ್ಬರ್ಗಾ ಜಿಲ್ಲೆಯಲ್ಲಿ ಕುಡಿಯವ ನೀರಿಗೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿಯಲ್ಲಿ ನಡೆದಿದಯೆನ್ನಲಾದ ಅವ್ಯವಹಾರ / ಹಣ ದುರುಪಯೋಗಕ್ಕೆ ಕಾರಣಾದ ಅಧಿಕಾರಿ / ನೌಕರರ ವಿರುದ್ಧ ತನಿಖೆ ನಡೆಸಲು ಮಾನ್ಯ ಉಪ ಲೋಕಾಯುಕ್ತರಿಗೆ ಪ್ರಕರಣವನ್ನು ವಹಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 215 ಪಬವ 2013 ದಿನಾಂಕ 21-06-2013
2. ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರ ಪತ್ರ ದಿನಾಂಕ 26-06-2013.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ ಇವರ ಪತ್ರ ಸಂಖ್ಯೆ. ಜಿಪಗು/ಮುಕಾನಿ/ಆಶಾ-1/ 2013-14/ ದಿನಾಂಕ. 26-06-2013.
4. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 14 ಇಎನ್‌ಕ್ಯೂ 2013 ದಿನಾಂಕ 05-07-2013.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 21-06-2013ರ ಆದೇಶದಲ್ಲಿ ಗುಲ್ಬರ್ಗಾ ಜಿಲ್ಲೆಯ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕಾಮಗಾರಿಯಲ್ಲಿ ಗುತ್ತಿಗೆದಾರರಲ್ಲದವರಿಗೆ ಹಾಗೂ ಒಬ್ಬರೇ ಹೆಸರಿನ ವ್ಯಕ್ತಿಗಳಿಗೆ ಚೆಕ್ ಮೂಲಕ ಹಣ ಪಾವತಿ ಮಾಡಿರುವ ಕುರಿತು ತನಿಖೆ ನಡೆಸಲು ಶ್ರೀ ಮುನೀಷ್ ಮೌದ್ಗಿಲ್ ಭಾ.ಆ.ಸೇ., ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರ ನೇತೃತ್ವದಲ್ಲಿ ಲೆಕ್ಕಾಧಿಕಾರಿ ಹಾಗೂ ತಾಂತ್ರಿಕ ಪರಿಣಿತರ ತಂಡವನ್ನು ನೇಮಿಸಿ, ತನಿಖೆ ನಡೆಸಿ ಐದು ದಿನಗಳೊಳಗಾಗಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಆದೇಶಿಸಲಾಗಿತ್ತು.

ಶ್ರೀ ಮುನೀಷ್ ಮೌದ್ಗಿಲ್ ಭಾ.ಆ.ಸೇ., ನಿರ್ದೇಶಕರು, ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 26-06-2013ರ ಪತ್ರದಲ್ಲಿ ಸಲ್ಲಿಸಿರುವ ವರದಿಯಲ್ಲಿ ಗುಲ್ಬರ್ಗಾ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕುಡಿಯುವ ನೀರಿನ ಕಾಮಗಾರಿಗಳಲ್ಲಿ ನಡೆದ ಅವ್ಯವಹಾರಗಳ ಬಗ್ಗೆ ತನಿಖೆ ನಡೆಸಿದ್ದು, ಈ ಕೆಳಕಂಡ ಹಣ ದುರುಪಯೋಗ / ಅವ್ಯವಹಾರಗಳು ನಡೆದಿರುವುದು ಕಂಡು ಬಂದಿದೆ ಎಂದು ವರದಿ ನೀಡಿರುತ್ತಾರೆ:-

---2

1. A booklet with the title ***"Statement showing the bills of PRE Division, Gulbarga under Coverage & Water Quality Component During Month of March 2013 C&Q Dtd 30-03-2013"*** was given that it contained details of payments to false contractors. In other words, the payments have been made in Gulbarga district in NRDWP to persons who were not real contractors.

2. These payments to false contractors run into lakhs and crores of rupees.
3. In this regard certain particular individuals have been paid lakhs of rupees for tens of works. There is, thus, a systematic fraud.
4. The bills have been paid to these unauthorized persons even for unapproved works. That is payments have been made for works which are not part of the approved Annual Action Plan (2012-13)
5. Many single works are split-up and KTPP Act provisions have been violated in award and payment for the works.

The full extent of fraud, misappropriation and defalcation runs into crores of rupees and requires an independent high level and detailed enquiry wherein

i. Hundreds of false and fictitious bills for bogus works for more than Rs. 4.00 Crores were paid during March 2013 alone.
ii. Each work for which payments have been made (this runs into hundreds of works) to quantify the loss to public exchequer.
iii. Each work-wise enquiry is necessary to state the number of cases where KTPP violation has been done. This runs into hundreds of cases.
iv. The AEE PRE Sub-division signatures are forged and false bills prepared in hundreds of cases. All cases need to be logged and the Executive Engineer, PRE Division, Gulbarga, Mr. Bheemakkanavara, made fully accountable for fraud, cheating and criminal conspiracy.
v. All the lapses and irregularitied are enquired into in detail

ಮೇಲ್ಕಂಡಂತೆ ಅವ್ಯವಹಾರ, ಹಣ ದುರುಪಯೋಗ ಮತ್ತು ಕರ್ತವ್ಯಲೋಪಗಳಿಗೆ ಈ ಕೆಳಕಂಡ ಅಧಿಕಾರಿ / ನೌಕರರು ಕಾರಣರಾಗಿರುತ್ತಾರೆಂದು ವರದಿ ಮಾಡುತ್ತಾ, ಅವರುಗಳನ್ನು ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸುವಂತೆ ಹಾಗೂ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸಲು ಪ್ರಕರಣವನ್ನು ಮಾನ್ಯ ಕರ್ನಾಟಕ ಲೋಕಾಯುಕ್ತಕ್ಕೆ ವಹಿಸುವಂತೆ ಸದರಿ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆ.

---3

1. *ಶ್ರೀ ಎಂ.ಹೆಚ್.ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ.*
2. *ಶ್ರೀ ಎಸ್.ಪಿ.ಪಾಟೀಲ್, ಲೆಕ್ಕಾಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ.*
3. *ಶ್ರೀ ಅರುಣ್‌ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ).*
4. *ಶ್ರೀ ಚಂದ್ರಶೇಖರ್ ನಾಶಿ, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ).*

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 26-06-2013ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ, ರವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ ರವರು ಜಿಲ್ಲೆಯ ಕುಡಿಯುವ ನೀರಿನ ಕಾಮಗಾರಿಗಳ ಬಗ್ಗೆ ಸಲ್ಲಿಸಿರುವ ಪ್ರಾಥಮಿಕ ವರದಿಯಲ್ಲಿ 2012-13ನೇ ಸಾಲಿನ ಕಡತಗಳನ್ನು ರ್‍ಯಾಂಡಮ್ ಆಗಿ ಆಯ್ಕೆ ಮಾಡಿ ಪರಿಶೀಲಿಸಿದಾಗ, ಸಾಧಾರಣವಾಗಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ ರವರಿಂದ ಅನುಮೋದನೆಗೊಂಡ ಕ್ರಿಯಾ ಯೋಜನೆಯನ್ವಯ ಇರುವುದು ಕಂಡು ಬಂದಿದ್ದು, ಆದರೆ ರೂ. 5.00 ಲಕ್ಷಕ್ಕಿಂತ ಮೇಲ್ಪಟ್ಟ ಕಾಮಗಾರಿಗಳಲ್ಲಿ ಒಬ್ಬ ಗುತ್ತಿಗೆದಾರರಿಗೆ ಕಾಮಗಾರಿ ಆದೇಶ ಮಂಜೂರು ಮಾಡಿದ್ದು, ಅದೇ ಅಂದಾಜು ಮೊತ್ತದೊಳಗಡೆ ಬೇರೊಬ್ಬ ಗುತ್ತಿಗೆದಾರರಿಗೆ ರೂ. 2.00 ಲಕ್ಷಕ್ಕಿಂತ ಕಡಿಮೆ ಮೊತ್ತಕ್ಕೆ ಉಪ ಗುತ್ತಿಗೆಗಳನ್ನು ಕೊಟ್ಟಿರುವುದು ದಾಖಲಾತಿಗಳಿಂದ ಕಂಡು ಬಂದಿದೆ ಎಂದು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕಚೇರಿಯಲ್ಲಿ ಲಭ್ಯವಾದ ನಮೂನೆ-32 ಗಳನ್ನು ಪರಿಶೀಲಿಸಲಾಗಿ, ಕಾರ್ಯಪಾಲಕ ಇಂಜಿನಿಯರ್ ರವರು ಮಾಡಿದ ಬ್ಯಾಂಕ್ ಅಡ್ವೈಸ್ ಪ್ರಕಾರ ಉಪ ಗುತ್ತಿಗೆದಾರರಿಗೆ ಹಣ ಪಾವತಿ ಮಾಡಿರುವುದು ಸ್ಪಷ್ಟವಾಗಿ ಕಂಡು ಬಂದಿದೆಯೆಂದು ತಿಳಿಸಿದ್ದಾರೆ.

ಶ್ರೀ ಎಂ.ಹೆಚ್.ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ ಇವರಿಗೆ ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರು ದಿನಾಂಕ 22-06-2013ರಂದು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ ಕಚೇರಿಗೆ ಈ ಪ್ರಕರಣ ಕುರಿತಂತೆ ವಿಚಾರಣೆಗೆ ಅವರು ಬರುವ ಪೂರ್ವದಲ್ಲಿಯೇ ಸದರಿ ವಿಚಾರಣೆಗೆ ಹಾಜರು ಇರಬೇಕೆಂದು ಮೌಖಿಕವಾಗಿ ನಿರ್ದೇಶನ ನೀಡಿದ್ದರೂ ಸಹ ಮೇಲಾಧಿಕಾರಿಗಳ ಪೂರ್ವಾನುಮತಿ ಇಲ್ಲದೆ ವಿಚಾರಣೆಗೆ ಗೈರು ಹಾಜರಾಗಿದ್ದು, ವಿಚಾರಣೆಗೆ ಬೇಕಾದ ದಾಖಲಾತಿಗಳನ್ನು ಹಾಗೂ ಮಾಹಿತಿಗಳನ್ನು ನೀಡಲು ವಿಫಲರಾಗಿದ್ದು, ವಿಚಾರಣೆಗೆ ಸಹಕಾರ ನೀಡದೆ ಇರುವುದು ವಾಸ್ತವಾಗಿದೆ ಎಂದು ಹಾಗೂ ಸದರಿ ಅಧಿಕಾರಿಗಳು ಮೇಲಾಧಿಕಾರಿಗಳ ಅನುಮತಿ ಇಲ್ಲದೆ ಈ ದಿನಾಂಕದವರೆವಿಗೂ ಸಹ ಅನಧಿಕೃತವಾಗಿ ಗೈರು ಹಾಜರಾಗಿರುತ್ತಾರೆಂದು ತಿಳಿಸುತ್ತಾ, ಸದರಿಯವರು ದಾಖಲಾತಿಗಳನ್ನು ಮತ್ತು ಸಾಕ್ಷ್ಯಾಧಾರಗಳನ್ನು ನಾಶಪಡಿಸುವ ಸಂಭವವಿರುವುದರಿಂದ ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸುವಂತೆ ವರದಿ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 05-07-2013 ರ ಸರ್ಕಾರದ ಆದೇಶದಲ್ಲಿ (1) ಶ್ರೀ ಎಂ.ಹೆಚ್.ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, (2) ಶ್ರೀ ಎಸ್.ಪಿ.ಪಾಟೀಲ್, ಲೆಕ್ಕಾಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್

ವಿಭಾಗ, ಗುಲ್ಬರ್ಗಾ, (3) ಶ್ರೀ ಅರುಣ್‌ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ) ಮತ್ತು (4) ಶ್ರೀ ಚಂದ್ರಶೇಖರ್ ನಾಶಿ, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ) ಇವರುಗಳ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ ಸೇವೆಯಿಂದ ಅಮಾನತ್ತುಗೊಳಿಸಲಾಗಿದೆ.

ಈ ಪ್ರಕರಣವು ಗಂಭೀರ ಸ್ವರೂಪದ ಪ್ರಕರಣವೆಂದು ಕಂಡು ಬಂದಿರುವ ಹಿನ್ನೆಲೆಯಲ್ಲಿ, ಪೂರ್ಣ ಪ್ರಮಾಣದಲ್ಲಿ ತನಿಖೆ ನಡೆಸಲು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 14 ಇಎನ್‌ಕ್ಯೂ 2013, ಬೆಂಗಳೂರು,**
**ದಿನಾಂಕ 05-07-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗುಲ್ಬರ್ಗಾ ಜಿಲ್ಲೆಯ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕಾಮಗಾರಿಯಲ್ಲಿ ಹಣದುರುಪಯೋಗ / ಅವ್ಯವಹಾರ ಮತ್ತು ಕರ್ತವ್ಯಲೋಪವೆಸಗಿರುವ (1) ಶ್ರೀ ಎಂ.ಹೆಚ್.ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, (2) ಶ್ರೀ ಎಸ್.ಪಿ.ಪಾಟೀಲ್, ಲೆಕ್ಕಾಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ, (3) ಶ್ರೀ ಅರುಣ್‌ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ) ಮತ್ತು (4) ಶ್ರೀ ಚಂದ್ರಶೇಖರ್ ನಾಶಿ, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ) ರವರುಗಳ ವಿರುದ್ಧ ವಿವರವಾದ ತನಿಖೆ / ವಿಚಾರಣೆಯನ್ನು ನಡೆಸಲು ಪ್ರಕರಣವನ್ನು 1984ರ ಕರ್ನಾಟಕ ಲೋಕಾಯುಕ್ತ ಅಧಿನಿಯಮ ಪ್ರಕರಣ 7(2ಎ) ರಡಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿದೆ.

ಪ್ರಕರಣಕ್ಕೆ ಅಗತ್ಯವಿರುವ ಮೂಲ ಕಡತಗಳನ್ನು ಹಾಗೂ ದಾಖಲಾತಿಗಳನ್ನು ಮತ್ತು ಇನ್ನಿತರ ಮಾಹಿತಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ ರವರು ಲೋಕಾಯುಕ್ತ ಕಚೇರಿಗೆ ಒದಗಿಸತಕ್ಕದ್ದು.

ಈ ಪ್ರಕರಣದ ಬಗ್ಗೆ ತನಿಖೆ / ವಿಚಾರಣೆ ನಡೆಸಿ ಆದಷ್ಟು ಬೇಗನೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಚಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5/7/2013

ಪ್ರತಿ:
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ.
9. ಶ್ರೀ ಎಂ.ಹೆಚ್.ಭೀಮಕ್ಕನವರ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ.
10. ಶ್ರೀ ಎಸ್.ಪಿ.ಪಾಟೀಲ್, ಲೆಕ್ಕಾಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ.
11. ಶ್ರೀ ಅರುಣ್‌ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ),
12. ಶ್ರೀ ಚಂದ್ರಶೇಖರ್ ನಾಶಿ, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗುಲ್ಬರ್ಗಾ (ಕಿರಿಯ ಇಂಜಿನಿಯರ್ ವೃಂದ)
13. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
14. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
15. ಮೇಲ್ವಿಚಾರಕರು, ಗಣಕ ಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
16. ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.